ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಪೊಲೀಸ್ ದೂರು ಪ್ರಾಧಿಕಾರ ರಚನೆ ಕುರಿತು

ಡಾ|| ಚಂದ್ರಶೇಖರ್ ಬಿ.ಪಾಟೀಲ್(ಪದವೀಧರರ ಕ್ಷೇತ್ರ):-

343(479) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ಪೊಲೀಸ್ ದೂರು ಪ್ರಾಧಿಕಾರ ರಚನೆ ಮಾಡಲಾಗಿದೆ; ಇಲ್ಲಿಯವರೆಗೆ ಈ ದೂರು ಪ್ರಾಧಿಕಾರಕ್ಕೆ ಬಂದ ದೂರುಗಳು ಎಷ್ಟು; ಮತ್ತು ಎಷ್ಟು ದೂರುಗಳಿಗೆ ಪರಿಹಾರ ಕಲ್ಪಿಸಲಾಗಿದೆ;

(ಆ) ಪೊಲೀಸ್ ದೂರು ಪ್ರಾಧಿಕಾರ ರಚನೆಯಾದರೂ ಸಹ ಸದಸ್ಯರ ಹುದ್ದೆಗಳನ್ನು ಸರಕಾರ ಭರ್ತಿ ಮಾಡಿರುವುದಿಲ್ಲವೆ; ಹಾಗಿದ್ದಲ್ಲಿ, ಎಷ್ಟು ಸದಸ್ಯ ಹುದ್ದೆಗಳು ಖಾಲಿ ಇವೆ?